# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 880 |
| ಉತ್ತರಿಸಬೇಕಾದ ದಿನಾಂಕ | 11.03.2026 |
| ಸದಸ್ಯರ ಹೆಸರು | ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ಸಚಿವರು | ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ 10 ವರ್ಷಗಳಲ್ಲಿ ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಕರ್ನಾಟಕ ಗೃಹ ಮಂಡಳಿ ವತಿಯಿಂದ ಅಭಿವೃದ್ಧಿಪಡಿಸಲಾಗಿರುವ ವಸತಿ ಬಡಾವಣೆಗಳ ಸಂಖ್ಯೆ ಎಷ್ಟು; (ವಿವರ ನೀಡುವುದು). | ಕಳೆದ 10 ವರ್ಷಗಳಲ್ಲಿ ಕಲಬುರಗಿ ಜಿಲ್ಲೆಯಲ್ಲಿ 02 ಬಡಾವಣೆಗಳನ್ನು ಹಾಗೂ ಯಾದಗಿರಿ ಜಿಲ್ಲೆಯಲ್ಲಿ 01 ಬಡಾವಣೆಯನ್ನು ಅಭಿವೃದ್ಧಿಪಡಸಲಾಗಿದೆ. ವಿವರಗಳನ್ನು ಅನುಬಂಧ-1 ರಲ್ಲಿ ಒದಗಿಸಲಾಗಿದೆ. |
| ಆ) | ಈ ಮೇಲ್ಕಂಡ ಜಿಲ್ಲೆಗಳಲ್ಲಿ ಅಭಿವೃದ್ಧಿ ಮಾಡಿರುವ ವಸತಿ ಬಡಾವಣೆಗಳಲ್ಲಿ ಎಷ್ಟು ನಿವೇಶನಗಳನ್ನು ಸಾರ್ವಜನಿಕರಿಗೆ ಹಂಚಿಕೆ ಮಾಡಲಾಗಿದೆ. ಹಂಚಿಕೆ ಮಾಡಲು ಬಾಕಿ ಇರುವ ನಿವೇಶನ ಗಳ ಸಂಖ್ಯೆ ಎಷ್ಟು; ಹಂಚಿಕೆಗೆ ಬಾಕಿ ಉಳಿದಿರಲು ಕಾರಣವೇನು; | ಕಲಬುರಗಿ ಜಿಲ್ಲೆಯ ಕಾಳಗನೂರು ಕುಸನೂರು 2ನೇ ಹಂತ ಹಾಗೂ ಕಾಳಗನೂರು ಕುಸನೂರು ಸಂಪರ್ಕ ರಸ್ತೆ ಬಡಾವಣೆಗಳಲ್ಲಿ 1888 ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ. 922 ನಿವೇಶನಗಳು ಹಂಚಿಕೆಗೆ ಬಾಕಿ ಇರುತ್ತದೆ. ಯಾದಗಿರಿ ಜಿಲ್ಲೆಯ ಗುರುಮಿಟಕಲ್ ಬಡಾವಣೆಯನ್ನು 60:40 ಅನುಪಾತದಲ್ಲಿ ಅಭಿವೃದ್ಧಿಪಡಿಸಿದ್ದು, ಭೂಮಾಲೀಕರಿಗೆ ಹಾಗೂ ಸಾರ್ವಜನಿಕರಿಗೆ ನಿವೇಶನಗಳನ್ನು ಸದ್ಯದಲ್ಲಿಯೇ ಹಂಚಿಕೆ ಮಾಡಲು ಕ್ರಮವಹಿಸಲಾಗುತ್ತಿದೆ. |
| ಇ) | ನಿವೇಶನ ಹಂಚಿಕೆಗೆ ನಿಗಧಿ ಮಾಡಿರುವ ಮಾನದಂಡಗಳೇನು, ದರವೆಷ್ಟು ಹಾಗೂ ಈಗಾಗಲೇ ಹಂಚಿಕೆ ಮಾಡಿರುವ ಬಡಾವಣೆಗಳಲ್ಲಿ ಎಲ್ಲಾ ಮೂಲ ಸೌಕರ್ಯಗಳನ್ನು ರಸ್ತೆ ಪಾರ್ಕ್, ಸಿ.ಎ ನಿವೇಶನಗಳನ್ನು ಅಭಿವೃದ್ಧಿಪಡಿಸಿ ಸ್ಥಳೀಯ ಸಂಸ್ಥೆಗಳಿಗೆ ಹಸ್ತಾಂತರಿಸಲಾಗಿದೆಯೇ? (ವಿವರ ನೀಡುವುದು) | ಕರ್ನಾಟಕ ಗೃಹ ಮಂಡಳಿ ಹಂಚಿಕೆ ರೆಗ್ಯುಲೇಶನ್ಸ್ 1983 ನಿಯಮ 9 ರಂತೆ ಇ-ಲಾಟರಿ ಮೂಲಕ ನಿವೇಶನಗಳನ್ನು ಹಂಚಿಕೆ ಮಾಡಲಾಗುವುದು. ಕಲಬುರಗಿ ಜಿಲ್ಲೆಯ ಕಾಳಗನೂರು ಕುಸನೂರು 2ನೇ ಹಂತ ಹಾಗೂ ಕಾಳಗನೂರು ಕುಸನೂರು ಸಂಪರ್ಕ ರಸ್ತೆ ಹಾಗೂ ಯಾದಗಿರಿ ಜಿಲ್ಲೆಯ ಗುರುಮಿಟಕಲ್ ಬಡಾವಣೆಗಳಲ್ಲಿ ಎಲ್ಲಾ ಮೂಲ ಸೌಕರ್ಯಗಳನ್ನು ರಸ್ತೆ, ಪಾರ್ಕ್, ಸಿ.ಎ ನಿವೇಶನಗಳನ್ನು ಅಭಿವೃದ್ಧಿಪಡಿಸಿ ಸ್ಥಳೀಯ ಸಂಸ್ಥೆಗಳಿಗೆ ಹಸ್ತಾಂತರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |

ಸಂಖ್ಯೆ: ವಇ 45 ಕಗ್ರಮಂ 2026

B. [signature]

**(ಬಿ.ಜೆಡ್. ಜಮೀರ್ ಅಹ್ಮದ್ ಖಾನ್)**
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು

ವಿಧಾನ ಪರಿಷತ್ ಸದಸ್ಯರಾದ ಶ್ರೀ. ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಇವರ
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ. 875 (880) ಕ್ಕೆ

## ಅನುಬಂಧ-1

| ಕ್ರ.ಸಂ. | ಜಿಲ್ಲೆ | ಬಡಾವಣೆ | ಹಂಚಿಕೆಯಾಗಿರುವ ನಿವೇಶನಗಳು | ಬಾಕಿ ಇರುವ ನಿವೇಶನಗಳು | ಮಂಡಳಿ ದರ (ಪ್ರತಿ ಚ.ಮೀ.ಗೆ) |
|---|---|---|---|---|---|
| 1 | ಕಲಬುರಗಿ | ಕಾಳಗನೂರು ಕುಸನೂರು 2ನೇ ಹಂತ | 1880 | 827 | 8073.00 |
| 2 | ಕಲಬುರಗಿ | ಕಾಳಗನೂರು ಕುಸನೂರು ಸಂಪರ್ಕ ರಸ್ತೆ | 08 | 95 | 13455.00 |
| 3 | ಯಾದಗಿರಿ | ಗುರುಮಿಟಕಲ್ | - | - | 6728.00 |
| | ಒಟ್ಟು | | 1888 | 922 | |

ಗೃಹ ಆಯುಕ್ತರು,
ಕರ್ನಾಟಕ ಗೃಹ ಮಂಡಳಿ,
ಬೆಂಗಳೂರು